# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಸ್.ಎಂ.ಸುಭಾನ್ ಸಾಹೇಬ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ.

ಓದಲಾಗಿದೆ.

1. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 23 ಇಎನ್‌ಕ್ಯೂ 2011, ದಿನಾಂಕ. 07-12-2011
2. ಶ್ರೀ ಎಸ್.ಎಂ.ಸುಭಾನ್ ಸಾಹೇಬ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಮನವಿ ದಿನಾಂಕ. 31-01-2012

**ಪ್ರಸ್ತಾವನೆ:**

2010-11ನೇ ಸಾಲಿನ ಕ್ರಿಯಾ ಯೋಜನೆ ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದರೂ ಬಿಲ್‌ಗಳನ್ನು ಪಾವತಿ ಮಾಡಿದ ಆರೋಪದ ಮೇಲೆ ಶ್ರೀ ಎಸ್.ಎಂ.ಸುಭಾನ್ ಸಾಹೇಬ್ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಬಾಕಿಯಿಟ್ಟು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ. 07-12-2011ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಕಟ್ಟಡದ ದುರಸ್ತಿ ಕಾಮಗಾರಿ ಸ್ಥಳ ಪರಿಶೀಲನೆ ನಡೆಸಿದ ತಂಡವು ಕಾಮಗಾರಿಯು ಪೂರ್ಣಗೊಂಡ ಬಗ್ಗೆ ನೀಡಿರುವ ವರದಿಯನ್ನು ಸಲ್ಲಿಸಿ, ಅವರ ಅಮಾನತ್ತನ್ನು ತೆರವುಗೊಳಿಸಿ, ಯಾವುದಾದರೂ ಖಾಲಿ ಇರುವ ಹುದ್ದೆಗೆ ನೇಮಿಸಬೇಕೆಂದು ಶ್ರೀ ಎಸ್.ಎಂ.ಸುಭಾನ್ ಸಾಹೇಬ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 31-01-2012ರ ಮನವಿಯಲ್ಲಿ ವಿನಂತಿಸಿರುತ್ತಾರೆ.

ಪ್ರಕರಣವನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಮುಂದಿನಂತೆ ಆದೇಶಿಸಿದೆ.

## ಆದೇಶ ಸಂಖ್ಯೆ. ಗ್ರಾಅಪ 23 ಇಎನ್‌ಕ್ಯೂ 2011, ಬೆಂಗಳೂರು, ದಿನಾಂಕ. 12-06-2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ ಶ್ರೀ ಎಸ್.ಎಂ.ಸುಭಾನ್ ಸಾಹೇಬ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಸದರಿಯವರ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿದೆ.

ಈ ಅಧಿಕಾರಿಗೆ ಸ್ಥಳನಿಯುಕ್ತಿ ಆದೇಶವನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

12/6/12
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)

---2

2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
3. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
4. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಬೆಂಗಳೂರು / ಚಿಕ್ಕಬಳ್ಳಾಪುರ.
6. ಅಧೀಕ್ಷಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ವೃತ್ತ, ಬೆಂಗಳೂರು.
7. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೆಂಗಳೂರು ಗ್ರಾಮಾಂತರ / ಚಿಕ್ಕಬಳ್ಳಾಪುರ.
8. ಸಂಬಂಧಿಸಿದ ಅಧಿಕಾರಿಗೆ.
9. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
11. ರಕ್ಷಾ ಕಡತ / ಮೇಲ್ವಿಚಾರಕರು, ಗಣಕಯಂತ್ರ ಕೋಶ ವಿಭಾಗ, / ಹೆಚ್ಚುವರಿ ಪ್ರತಿಗಳು.